ಅರ್ಹ ಫಲಾನುಭವಿಗಳಿಗೆ ಪಡಿತರ ಚೀಟಿ

871(382); ಡಾ॥ ಉಮೇಶ್ ಜಾಧವ, (ಚಿಂಚೋಳಿ)

ಅ) ಗುಲ್ಬರ್ಗಾ ಜಿಲ್ಲೆಯ ಚಿಂಚೋಳಿ ತಾಲ್ಲೂಕು ಅತಿ ಹಿಂದುಳಿದ ಪ್ರದೇಶವಾಗಿರುವುದರಿಂದ ಅರ್ಹ ಫಲಾನುಭವಿಗಳಿಗೆ ಪಡಿತರ ಚೀಟಿಯನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ನ್ಯಾಯಬೆಲೆ ಅಂಗಡಿಗಳ ಪಡಿತರಿಗೆ ವಾರದಲ್ಲಿ ಎಷ್ಟು ದಿನ ಆಹಾರಧಾನ್ಯ ವಿತರಣೆ ಮಾಡಲಾಗುವುದು (ವಿವರ ನೀಡುವುದು);

ಇ) ಚಿಂಚೋಳಿ ತಾಲ್ಲೂಕಿನಲ್ಲಿ ಹೊಸದಾಗಿ ನ್ಯಾಯಬೆಲೆ ಅಂಗಡಿಗಳ ಅನುಮತಿ ನೀಡಲು ಸ್ಥಳ ಪರಿಶೀಲನೆ ಮಾಡಿ ಅವಶ್ಯಕವಿರುವ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮಕ್ಕೈಗೊಳ್ಳಲಾಗುವುದೇ?

ಶ್ರೀ ದಿನೇಶ್ ಗುಂಡೂರಾವ್(ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು)

ಅ) ಆನ್‌ಲೈನ್ ಮೂಲಕ ಅರ್ಜಿಯನ್ನು ಪಡೆಯಲಾಗಿದ್ದು, ಗ್ರಾಮಾಂತರ ಪ್ರದೇಶದಲ್ಲಿ ಗ್ರಾಮ ಪಂಚಾಯತ್ ಮುಖಾಂತರ ಮತ್ತು ಗ್ರಾಮಲೆಕ್ಕಾಧಿಕಾರಿಗಳ ಮೂಲಕ ಪಟ್ಟಣ ಪ್ರದೇಶದಲ್ಲಿ ಪಟ್ಟಣ ಪಂಚಾಯತ್ ಇಲಾಖೆ ಕರವಸೂಲಿಗಾರರು, ಸಿಬ್ಬಂದಿಯವರಿಂದ ಸದರಿ ಅರ್ಜಿಗಳನ್ನು ಪರಿಶೀಲನೆ ಮಾಡಿಸಿ ಈಗಾಗಲೇ ಪಡಿತರ ಚೀಟಿ ವಿತರಿಸುವ ಕಾರ್ಯ ಜಾರಿಯಲ್ಲಿರುತ್ತದೆ.

ಆ) ಸರ್ಕಾರದ ಆದೇಶದಂತೆ ಪಡಿತರ ಖಾತ್ರಿ ಯೋಜನೆ ದಿನಾಂಕ 01.02.2014ರಿಂದ ಜಾರಿಗೆ ಬರುತ್ತಿದ್ದು, ಪ್ರತಿ ತಿಂಗಳು ದಿನಾಂಕ 1ನೇ ತಾರೀಖಿನಿಂದ 10ನೇ ತಾರೀಖಿನ ವರೆಗೆ ಬೆಳಿಗ್ಗೆ 8.00 ರಿಂದ ರಾತ್ರಿ 8.00 ರವರೆಗೆ (ಮಧ್ಯಾಹ್ನ 1 ಗಂಟೆಯಿಂದ 2 ಗಂಟೆಯವರೆಗೆ ಊಟದ ಸಮಯ ಹೊರತುಪಡಿಸಿ) ರಾಷ್ಟ್ರೀಯ ರಜೆಯ ದಿನಗಳನ್ನು

ಹೊರತುಪಡಿಸಿ ಮಂಗಳವಾರ ರಜೆ ದಿನಗಳಲ್ಲಿ ಸಹ ವಿತರಣಾ ಕಾರ್ಯ ನಡೆಯುವ ಸೂಚನೆಗಳು ಇರುತ್ತವೆ. ಅಲ್ಲದೆ ನಂತರದ ದಿನಗಳಲ್ಲಿ ಮಾಹೆಯ 11ನೇ ತಾರೀಖಿನಿಂದ ತಿಂಗಳ ಕೊನೆಯವರೆಗೆ ಬೆಳಿಗ್ಗೆ 8.00 ರಿಂದ 12ರವರೆಗೆ ಮತ್ತು ಸಾಯಂಕಾಲ 4.00 ರಿಂದ 8.00 ಗಂಟೆಯವರೆಗೆ ಮಂಗಳವಾರ ಮತ್ತು ರಾಷ್ಟ್ರೀಯ ರಜೆಯ ದಿನಗಳನ್ನು ಹೊರತುಪಡಿಸಿ ಪಡಿತರ ವಿತರಣೆ ಕಾರ್ಯ ಜಾರಿಯಲ್ಲಿರುತ್ತದೆ.

ಇ) ಅವಶ್ಯಕವಿರುವ ಸ್ಥಳಗಳಲ್ಲಿ ನಿಯಮಾನುಸಾರ ಪರಿಶೀಲಿಸಿ ಹೊಸ ನ್ಯಾಯಬೆಲೆ ಅಂಗಡಿ ತೆರೆಯಲು ಕ್ರಮವಹಿಸಲಾಗುವುದು.

ಹೈದರಾಬಾದ್–ಕರ್ನಾಟಕ ಸಂಶೋಧನೆಗಾಗಿ ಅನುದಾನ

872(1150); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಹೈದ್ರಾಬಾದ್ ಕರ್ನಾಟಕದಲ್ಲಿ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಅಭಿವೃದ್ಧಿಗಾಗಿ ಆಯವ್ಯಯದಲ್ಲಿ ಬಿಡುಗಡೆ ಮಾಡಲಾಗಿರುವ ಅನುದಾನವೆಷ್ಟು;

ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೂ ಈ ಯೋಜನೆಯಡಿಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಹಾಗೂ ಮಂಜೂರಾದ ಅನುದಾನದಲ್ಲಿ ಎಷ್ಟು ಬಿಡುಗಡೆಯಾಗಿದೆ; (ಸಂಪೂರ್ಣ ವಿವರ ನೀಡುವುದು)

ಶ್ರೀ ಎಸ್.ಆರ್. ಪಾಟೀಲ್ (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು)

ಅ) **ಮತ್ತು ಆ)** ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಅಭಿವೃದ್ಧಿಗಾಗಿ ಪ್ರಸಕ್ತ ಆಯವ್ಯಯದಲ್ಲಿ ಪ್ರತ್ಯೇಕವಾಗಿ ಯಾವುದೇ ಅನುದಾನ